# ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ

ಸಂಖ್ಯೆ: ಮಾಹಆ 48 ಆಡಳಿತ 2018

3ನೇ ಮಹಡಿ, 5ನೇ ಹಂತ, ಬಹುಮಹಡಿ ಕಟ್ಟಡ,
ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು,
ದಿನಾಂಕ: 24-12-2018.

## ವಿವಿಧ ವೃಂದದ ಹುದ್ದೆಗಳಿಗಾಗಿ ನೇಮಕಾತಿ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ಮಂಜೂರಾದ ಈ ಕೆಳಕಾಣಿಸಿದ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇರೆಗೆ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿಯು 06 ತಿಂಗಳ ಅವಧಿಗೆ ಅಥವಾ ನೇಮಕಾತಿಯಾದವರ ಸೇವೆಯು ತೃಪ್ತಿಕರವೆಂದು ಕಂಡುಬಂದಲ್ಲಿ ಪುನ: ಪ್ರತಿ 06 ತಿಂಗಳ ಅವಧಿಗೆ ಮುಂದುವರೆಸುವ ಷರತ್ತಿಗೊಳಪಟ್ಟಿರುತ್ತದೆ.

| ಕ್ರ. ಸಂ. | ಹುದ್ದೆಯ ಪದನಾಮ ಮತ್ತು ವೇತನ ಶ್ರೇಣಿ | ಹುದ್ದೆಗಳ ಸಂಖ್ಯೆ | ಅರ್ಹತೆ / ವಿದ್ಯಾರ್ಹತೆ ಮತ್ತು ಅನುಭವ |
|---|---|---|---|
| 1. | ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿ<br><br>52650-97100 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು. ಕರ್ನಾಟಕ ಸರ್ಕಾರದ ಸಚಿವಾಲಯದ ಅಧೀನ ಕಾರ್ಯದರ್ಶಿ ಹುದ್ದೆಯಲ್ಲಿ ಅಥವಾ ಆಪ್ತ ಕಾರ್ಯದರ್ಶಿ ಗ್ರೇಡ್-2 ಹುದ್ದೆಯಲ್ಲಿ ಸೇವೆ ಸಲ್ಲಿಸಿದವರಾಗಿರಬೇಕು ಅಥವಾ ರಾಜ್ಯ ಸಿವಿಲ್ ಸೇವೆಗಳಲ್ಲಿ ಸಮಾನಂತರ ಹುದ್ದೆಯಲ್ಲಿ ಸೇವೆ ಸಲ್ಲಿಸಿದವರಾಗಿರಬೇಕು. ಸದರಿ ವೃಂದದಲ್ಲಿ ಕನಿಷ್ಠ 03 ವರ್ಷಗಳ ಸೇವೆ ಸಲ್ಲಿಸಿದ ಅನುಭವ ಹೊಂದಿರಬೇಕು. ಶಿಷ್ಟಾಚಾರ ಹಾಗೂ ಕಂಪ್ಯೂಟರ್ ವಿಷಯಗಳಲ್ಲಿ ಜ್ಞಾನ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 2 | ಸಾರ್ವಜನಿಕ ಸಂಪರ್ಕಾಧಿಕಾರಿ<br><br>52650-97100 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು. ಶಿಷ್ಟಾಚಾರ ಹಾಗೂ ಕಂಪ್ಯೂಟರ್ ವಿಷಯಗಳಲ್ಲಿ ಜ್ಞಾನ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. ಯಾವುದೇ ಇಲಾಖೆ / ಸಂಸ್ಥೆಯಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿಯೆಂದು ಸೇವೆ ಸಲ್ಲಿಸಿದ ಅನುಭವ ಹೊಂದಿರಬೇಕು. |
| 3. | ಸಂಶೋಧನಾ ಸಹಾಯಕರು / ಕಾನೂನು ಸಹಾಯಕರು<br><br>33450-62600 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು.<br><br>ಮಾನವ ಹಕ್ಕುಗಳ ಕ್ಷೇತ್ರದಲ್ಲಿ ಜ್ಞಾನ / ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 4. | ಸಹಾಯಕ ವಿಲೇಖನಾಧಿಕಾರಿ<br><br>52650-97100 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು.<br><br>ಉಚ್ಚ ನ್ಯಾಯಾಲಯದಲ್ಲಿ ಅಥವಾ ಅಧೀನ ನ್ಯಾಯಾಲಯಗಳಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |

--2

www.kpscvaani.com

| | | | |
|---|---|---|---|
| 5. | ಶಾಖಾಧಿಕಾರಿ<br><br>43100-83900 | 03 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು.<br><br>ಸರ್ಕಾರದ ಇಲಾಖೆಗಳಲ್ಲಿ ಶಾಖಾಧಿಕಾರಿಯೆಂದು ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 6. | ಕೋರ್ಟ್ ಅಧಿಕಾರಿ<br><br>43100-83900 | 03 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು.<br><br>ಉಚ್ಚ ನ್ಯಾಯಾಲಯದಲ್ಲಿ ಅಥವಾ ಅಧೀನ ನ್ಯಾಯಾಲಯಗಳಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 7. | ಲೆಕ್ಕಾಧೀಕ್ಷಕರು<br><br>40900-78200 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು.<br><br>ಸರ್ಕಾರದ ಇಲಾಖೆಗಳಲ್ಲಿ ಲೆಕ್ಕಾಧೀಕ್ಷಕರಾಗಿ ಸೇವೆ ಸಲ್ಲಿಸಿದ ಮತ್ತು ಲೆಕ್ಕಪತ್ರ ವಿಷಯಗಳಲ್ಲಿ, ಕಂಪ್ಯೂಟರ್ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 8. | ತೀರ್ಪುಬರಹಗಾರರು<br><br>37900-70850 | 01 | ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು (ಹಿರಿಯ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು ಮತ್ತು<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಶೀಘ್ರಲಿಪಿ ಪರೀಕ್ಷೆಯಲ್ಲಿ (ಹಿರಿಯ) ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು.<br><br>ಉಚ್ಚ ನ್ಯಾಯಾಲಯದಲ್ಲಿ ಅಥವಾ ಅಧೀನ ನ್ಯಾಯಾಲಯಗಳಲ್ಲಿ ತೀರ್ಪುಬರಹಗಾರರೆಂದು ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 9. | ಸಹಾಯಕರು<br><br>30350-58250 | 02 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು.<br><br>ಗಣಕಯಂತ್ರ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |

--3

www.kpscvaani.com

| | | | |
|---|---|---|---|
| 10. | ಮಾನ್ಯ ಅಧ್ಯಕ್ಷರ ಆಪ್ತ ಸಹಾಯಕರು / ಶೀಘ್ರಲಿಪಿಕಾರರು<br><br>30350–58250 | 01 | ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು (ಹಿರಿಯ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು ಮತ್ತು<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಶೀಘ್ರಲಿಪಿ ಪರೀಕ್ಷೆಯಲ್ಲಿ (ಹಿರಿಯ) ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು. ಗಣಕಯಂತ್ರ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. |
| 11. | ಶೀಘ್ರಲಿಪಿಕಾರರು<br><br>30350–58250 | 03 | ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು (ಹಿರಿಯ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು ಮತ್ತು<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಶೀಘ್ರಲಿಪಿ ಪರೀಕ್ಷೆಯಲ್ಲಿ (ಹಿರಿಯ) ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು. ಗಣಕಯಂತ್ರ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. |
| 12. | ಶೀಘ್ರಲಿಪಿಕಾರರು<br><br>27650–52650 | 01 | ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು (ಹಿರಿಯ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು ಮತ್ತು<br><br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಶೀಘ್ರಲಿಪಿ ಪರೀಕ್ಷೆಯಲ್ಲಿ (ಹಿರಿಯ) ಉತ್ತೀರ್ಣರಾಗಿರಬೇಕು ಅಥವಾ ಸಮಾನಾಂತರ ವಿದ್ಯಾರ್ಹತೆ ಹೊಂದಿರಬೇಕು. ಗಣಕಯಂತ್ರ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. |
| 13. | ರಿಕಾರ್ಡ್ ಕೀಪರ್<br>27650–52650 | 01 | ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು.<br><br>ಉಚ್ಚ ನ್ಯಾಯಾಲಯದಲ್ಲಿ ಅಥವಾ ಅಧೀನ ನ್ಯಾಯಾಲಯಗಳಲ್ಲಿ ಅಥವಾ ಸರ್ಕಾರದ ಯಾವುದೇ ಇಲಾಖೆಗಳಲ್ಲಿ ರೀಕಾರ್ಡ್ ಕೀಪರ್ ಎಂದು ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. ಗಣಕಯಂತ್ರ ನಿರ್ವಹಣೆಯಲ್ಲಿ ಜ್ಞಾನ ಹೊಂದಿದವರಾಗಿರಬೇಕು. |

www.kpscvaani.com

| | | | |
|---|---|---|---|
| 14. | ಕಿರಿಯ ಸಹಾಯಕರು / ಕಂಪ್ಯೂಟರ್ ಆಪರೇಟರ್<br><br>21400-42000 | 02 | ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಸರ್ಕಾರದಿಂದ ಅಥವಾ ಸರ್ಕಾರದಿಂದ ಅನುಮೋದಿತ ಏಜೆನ್ಸಿಯವರು ನಡೆಸುವ Computer Literacy Test ನಲ್ಲಿ ಉತ್ತೀರ್ಣರಾಗಿರಬೇಕು. ಕಾರ್ಯನಿರ್ವಹಣೆಯಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಲ್ಲವರಾಗಿರಬೇಕು. ಆಂಗ್ಲ ಭಾಷೆಯು ಅಪೇಕ್ಷಣೀಯವಾದುದು. |
| 15. | ವಾಹನ ಚಾಲಕರು<br><br>21400-42000 | 04 | ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿದವರಾಗಿರಬೇಕು.<br><br>ಲಘು ಮೋಟಾರು ವಾಹನ ಚಾಲನಾ ಪರವಾನಿಗೆಯನ್ನು ಪಡೆದಿರಬೇಕು. ಕನ್ನಡ ಭಾಷೆಯಲ್ಲಿ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. |
| 16 | ಗ್ರೂಪ್-ಡಿ<br><br>17000-28950 | 05 | ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿದವರಾಗಿರಬೇಕು. |

ಕ್ರಮ ಸಂಖ್ಯೆ: 2, 3, ಮತ್ತು 9 ರಿಂದ 16 ರವರೆಗಿನ ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ:01-12-2018ಕ್ಕೆ 21 ವರ್ಷದಿಂದ 35 ವರ್ಷಗಳ ವಯೋಮಿತಿಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 62 ವರ್ಷ ವಯೋಮಿತಿ ಒಳಗಿನ ನಿವೃತ್ತಿ ಹೊಂದಿದ ಸರ್ಕಾರಿ ನೌಕರರು ಕ್ರಮ ಸಂ: 1, 4, 5, 6, 7 ಮತ್ತು 8 ರಲ್ಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಪರಂತು, ಸದರಿ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹೊಂದಿದವರಾಗಿರಬೇಕು ಕ್ರಮ ಸಂ:4 ಮತ್ತು 6 ಕ್ಕೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಾನೂನು ಪದವಿಯನ್ನು ಹೊಂದಿದವರಾಗಿರಬೇಕು. ವಯೋಮಿತಿಯಲ್ಲಿ ಸಡಿಲಿಕೆ ನೀಡಬಹುದಾಗಿರುವುದನ್ನು ಪರಿಗಣಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ನೇಮಕಾತಿ ಹೊಂದಿದ ಹುದ್ದೆಯ ವೇತನ ಶ್ರೇಣಿಯ ಕನಿಷ್ಟ ಮೂಲ ವೇತನವನ್ನು ಸಂಚಿತ ವೇತನವನ್ನಾಗಿ ಪಡೆಯಲು ಅರ್ಹರಾಗಿರುತ್ತಾರೆ.

ಈ ನೇಮಕಾತಿಗಳು ನಿಗದಿತ ಅವಧಿಗೆ ಅಂದರೆ ಸರ್ಕಾರದಿಂದ ನೇಮಕಾತಿಯಾಗುವವರೆಗೆ ಮಾಡಲಾದ ತಾತ್ಕಾಲಿಕ ನೇಮಕಾತಿಗಳಾಗಿರುತ್ತವೆ.

ಆಯೋಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ತಾವು ಹೊಂದಿದ ವಿದ್ಯಾರ್ಹತೆಗೆ ಅನುಗುಣವಾಗಿ ಯಾವುದೇ ಹುದ್ದೆಗೆ ಅರ್ಜಿ ಸಲ್ಲಿಸಬಹುದು. ಅವರು ಆಯೋಗದಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ, ಸೇವೆ ಸಲ್ಲಿಸಿದ ಅವಧಿಗೆ ವಯೋಮಿತಿಯಲ್ಲಿ ವಿನಾಯಿತಿ ನೀಡಲಾಗುವುದು.

ನೇಮಕಾತಿ ಮಾಡಿಕೊಳ್ಳುವಾಗ ಹೆಚ್ಚು ವರ್ಷಗಳ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ನಿಗದಿತ ಪ್ರಪತ್ರದಲ್ಲಿ ನೋಂದಣಿ ಅಂಚೆ ಅಥವಾ ಸ್ಪೀಡ್ ಪೋಸ್ಟ್ ಮೂಲಕ ಅಥವಾ ಇ-ಮೇಲ್ ಮೂಲಕ ದಿನಾಂಕ:25-01-2019ರಂದು ಅಥವಾ ಅದಕ್ಕಿಂತ ಮುಂಚಿತವಾಗಿ ಅರ್ಜಿ ಸಲ್ಲಿಸಬಹುದು. ಅಧಿಸೂಚನೆ ಹಾಗೂ ಪ್ರಪತ್ರದ ವಿವರಗಳು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ Website: http://www.kshrc.kar.nic.in ನಲ್ಲಿ ಲಭ್ಯವಿರುತ್ತದೆ. ಭರ್ತಿ ಮಾಡಲಾದ ಅರ್ಜಿಗಳನ್ನು ನೋಂದಣಿ ಅಂಚೆ ಅಥವಾ ಸ್ಪೀಡ್ ಪೋಸ್ಟ್ ಮೂಲಕ ಅಥವಾ ಇ-ಮೇಲ್ secretarykshrc@gmail.com ಮೂಲಕ ಸಲ್ಲಿಸಬಹುದು.

--5

www.kpscvaani.com

ನೋಂದಣಿ ಅಂಚೆ ಅಥವಾ ಸ್ಪೀಡ್ ಪೋಸ್ಟ್ ಮೂಲಕ ಸಲ್ಲಿಸುವ ಅರ್ಜಿಗಳನ್ನು ನಿಗದಿತ ಪ್ರಪತ್ರದಲ್ಲಿ ಈ ಕೆಳಕಾಣಿಸಿದ ವಿಳಾಸಕ್ಕೆ ಕಳುಹಿಸುವುದು:-

ಕಾರ್ಯದರ್ಶಿಗಳು,
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ,
5ನೇ ಹಂತ, ಬಹುಮಹಡಿ ಕಟ್ಟಡ, 3ನೇ ಮಹಡಿ,
ಬೆಂಗಳೂರು-560001.

ನೋಂದಣಿ ಅಂಚೆ ಅಥವಾ ಸ್ಪೀಡ್ ಪೋಸ್ಟ್ ಅಥವಾ ಇ-ಮೇಲ್ secretarykshrc@gmail.com ಮೂಲಕ ಸಲ್ಲಿಸಲಾಗುವ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ:25-01-2019.

Maithili Rao

ಕಾರ್ಯದರ್ಶಿ
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ

www.kpscvaani.com